# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1361
ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 30.12.2022

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಉತ್ತರ ಕರ್ನಾಟಕದ ವಾಣಿಜ್ಯ ನಗರಿಯಾದ ಹುಬ್ಬಳ್ಳಿಗೆ ಹಾವೇರಿ, ಧಾರವಾಡ, ಗದಗ, ಉತ್ತರ ಕನ್ನಡ, ದಾವಣಗೆರೆ, ಕೊಪ್ಪಳ, ಬೆಳಗಾವಿ, ಬಾಗಲಕೋಟ ಹಾಗೂ ರಾಜ್ಯದ ಇನ್ನಿತರೆ ಭಾಗಗಳಿಂದ ಸಾವಿರಾರು ಜನರು ತಮ್ಮ ದೈನಂದಿನ ಕೆಲಸಗಳ ನಿಮಿತ್ತ ಬಂದು ಹೋಗುತ್ತಿರುವುದರಿಂದ ಅವರುಗಳಿಗೆ ಹುಬ್ಬಳ್ಳಿಯಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹುಬ್ಬಳ್ಳಿ ನಗರದಲ್ಲಿ ಮೂರು ಬಸ್ ನಿಲ್ದಾಣಗಳಿದ್ದು, ಅದರಲ್ಲಿ<br>1. ಕಿತ್ತೂರು ಚನ್ನಮ್ಮ ವೃತ್ತದಲ್ಲಿಯ ಬಸ್ ನಿಲ್ದಾಣವನ್ನು ಸ್ಮಾರ್ಟ ಸಿಟಿ ಯೋಜನೆಯಡಿ ಎಲ್ಲ ಸೌಲಭ್ಯಗಳನ್ನೊಳಗೊಂಡಂತೆ ಆಧುನಿಕ ಮಾದರಿಯಲ್ಲಿ ನಿರ್ಮಿಸಲಾಗುತ್ತಿದೆ.<br>2. ಹೊಸೂರು ಬಸ್ ನಿಲ್ದಾಣವನ್ನು ಬಿ.ಆರ್.ಟಿ.ಎಸ್. ಯೋಜನೆಯಡಿ ಎಲ್ಲ ಮೂಲಭೂತ ಸೌಕರ್ಯಗಳೊಂದಿಗೆ ನಿರ್ಮಿಸಲಾಗಿದೆ.<br>3. ಗೋಕುಲ ರಸ್ತೆಯಲ್ಲಿನ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. |
| ಆ. | ಪ್ರಸ್ತುತ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಬಸ್ ನಿಲ್ದಾಣದಲ್ಲಿ ಬಸ್ ಶೆಲ್ಟರ್ ಗಳು ಇಲ್ಲದ ಕಾರಣ ಪ್ರಯಾಣಿಕರು ಎಲ್ಲಾ ಸ್ಥಳಗಳಲ್ಲಿ ಬಸ್ಸನ್ನು ಹತ್ತುವುದು ಹಾಗೂ ಬಸ್ಸಿನಿಂದ ಇಳಿಯುತ್ತಿರುವುದರಿಂದ ಸರಿಯಾದ ವ್ಯವಸ್ಥೆಗಳು ಇಲ್ಲದೇ ಅಪಘಾತಗಳು ಸಂಭವಿಸುವುದರಿಂದ ಹುಬ್ಬಳ್ಳಿ ನಗರಕ್ಕೆ ಹೆಚ್ಚಿನ ರೀತಿಯಲ್ಲಿ ಬಸ್ ಶೆಲ್ಟರ್‌ಗಳನ್ನು ಹೊಸದಾಗಿ ನಿರ್ಮಿಸುವಲ್ಲಿ ಸರ್ಕಾರದ ನಿಲುವೇನು; | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಸುತ್ತೋಲೆ ಸಂಖ್ಯೆ: 01/2015-16 ದಿ: 06-06-2015 ರ ಮಾರ್ಗಸೂಚಿಯನ್ವಯ ಸಾರಿಗೆ ಸಂಸ್ಥೆಗಳ ವತಿಯಿಂದ ಗ್ರಾಮೀಣ/ನಗರ/ಪಟ್ಟಣ ಮಟ್ಟದಲ್ಲಿ ಯಾವುದೇ ಬಸ್ ಶೆಲ್ಟರ್‌ಗಳನ್ನು ನಿರ್ಮಿಸುವುದನ್ನು ತಡೆಹಿಡಿಯಲಾಗಿದೆ. ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಲೋಕೋಪಯೋಗಿ ಇಲಾಖೆ, ಪುರಸಭೆ, ನಗರಸಭೆ, ಮಹಾನಗರ ಸಭೆ ಅಥವಾ ಇನ್ನಿತರ ಸರ್ಕಾರೇತರ ಸಂಘ ಸಂಸ್ಥೆಗಳಿಂದ ಪ್ರಾಯೋಗಕತ್ವದಡಿಯಲ್ಲಿ ನಿರ್ಮಿಸಿಕೊಳ್ಳಬಹುದಾಗಿದೆ. |

Scanned with CamScanner

| | | |
|---|---|---|
| ಇ. | ಪ್ರಸ್ತುತ ಬಸ್ ನಿಲ್ದಾಣಗಳಲ್ಲಿ ಶೌಚಾಲಯಗಳ ಕೊರತೆಯಿದ್ದು, ಅದರ ನಿರ್ವಹಣೆಯು ಸರಿಯಿಲ್ಲದ ಕಾರಣ ಬಹುಮುಖ್ಯವಾಗಿ ಮಹಿಳೆಯರಿಗೆ ತುಂಬಾ ತೊಂದರೆಯಾಗುತ್ತಿರುವುದನ್ನು ತಪ್ಪಿಸಲು ಸದರಿ ಬಸ್ ನಿಲ್ದಾಣಗಳಲ್ಲಿ ಹೆಚ್ಚಿಗೆ ಶೌಚಾಲಯಗಳನ್ನು ನಿರ್ಮಿಸಲು ಸರ್ಕಾರವು ಕೈಗೊಂಡ ಕ್ರಮವೇನು? | ಹುಬ್ಬಳ್ಳಿ ನಗರದಲ್ಲಿ ಮೂರು ಬಸ್ ನಿಲ್ದಾಣಗಳಿದ್ದು, ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ಹೊಸ ಬಸ್ ನಿಲ್ದಾಣವನ್ನು ನಿರ್ಮಿಸಲಾಗುತ್ತಿದೆ. ಹೊಸೂರು ಕ್ರಾಸ್‌ನಲ್ಲಿ ಬಿ.ಆರ್.ಟಿ.ಎಸ್. ಬಸ್ ನಿಲ್ದಾಣದಲ್ಲಿ ಅಗತ್ಯ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಗೋಕುಲ ರಸ್ತೆ ಬಸ್ ನಿಲ್ದಾಣದಲ್ಲಿ ಪ್ರತಿದಿನ ಸಂಚರಿಸುವ ಪ್ರಯಾಣಿಕರ ಸಂಖ್ಯೆಯನುಗುಣವಾಗಿ ಅಗತ್ಯ ಸಂಖ್ಯೆಯ ಶೌಚಾಲಯಗಳನ್ನು ನಿರ್ಮಿಸಲಾಗಿದೆ.<br><br>ಬಸ್ ನಿಲ್ದಾಣಗಳ ಆವರಣ ಮತ್ತು ಶೌಚಾಲಯಗಳ ಸಮರ್ಪಕ ನಿರ್ವಹಣೆಗೆ ಖಾಸಗಿಯವರನ್ನು ಇ-ಟೆಂಡರ್ ಮೂಲಕ ಆಯ್ಕೆ ಮಾಡಿ ಶಾಸನ ಬದ್ಧ ನಿಯಮಾವಳಿಗಳನ್ವಯ ಸ್ವಚ್ಛತಾ ಕಾರ್ಯವನ್ನು ನಿರ್ವಹಿಸುವ ಪದ್ಧತಿ ಜಾರಿಯಲ್ಲಿರುತ್ತದೆ. ಖಾಸಗಿ ಗುತ್ತಿಗೆದಾರರು ಇಲ್ಲದ ಬಸ್ ನಿಲ್ದಾಣಗಳಲ್ಲಿ ಸ್ವಕೀಯ ವ್ಯವಸ್ಥೆಯಡಿಯಲ್ಲಿ ಸ್ವಚ್ಛತೆಯನ್ನು ನಿರ್ವಹಿಸಲಾಗುತ್ತಿದೆ. |

ಂಖ್ಯೆ: ಟಿಡಿ 344 ಟಿಸಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗ
ಕಲ್ಯಾಣ ಸಚಿವರು

Scanned with CamScanner